# How about an ambulance switch to turn signal green?

Pearl.DSouza@timesgroup.com

**Bengaluru:** Ambulances getting stuck in crawling traffic is a common painful sight across Bengaluru. Is there a tech-driven solution to this?

Two tenth-standard students of National Hill View Public School (Banashankari) — Aditya Chetan Rao and Neehar Gowda — came up with a suggestion: Installing a switch in the ambulance that allows the driver to turn the signal green when the vehicle nears a traffic junction!

The suggestion was made at Ideathon'23-Inter School Challenge, a student innovation programme by Youth Leadership Summit 2023-24, convenor Aisshwarya DKS Hegde, as part of 'Brand Bengaluru' initiative in which around 50 schools participated.

Aditya and Neehar's idea won them a 40-hour Havard programme on innovation and entrepreneurship.

Neehar pointed out that nearly 50 per cent of trauma patients in Bengaluru do not get aid in the golden hour and 30 per cent don't get an ambulance in the stipulated 30 minutes that they are supposed to arrive, because of traffic. Aditya, citing a survey, said it takes 29 minutes and 10 seconds to cover 10 km in the city and that poses a major hindrance to the emergency medical service. As a solution, the two proposed transmitting signals from the ambulance to the traffic signal, so that the signal turns green.

"A transmitter will be fitted on the ambulance and it will transmit a signal once the switch is flipped in the driver's cabin. The signal would reach the receiver placed on the traffic light and activate the circuit. The light of the lane with the ambulance will turn green, while others turn red. This system can be integrated with Bengaluru's existing traffic management system — with the GPS installed in the ambulance, the signals can sense the proximity of ambulances. Not just that, GPS will allow hospitals to be prepared for patients by the time they arrive," said the duo.

Syed Asif



**WINNING IDEA:** Aditya Chetan Rao & Neehar Gowda's idea won them a 40-hour Havard programme on innovation & entrepreneurship

## Other ideas that won appreciation

**APP FOR WASTE MANAGEMENT:** Another duo that bagged the Havard programme was Rahul R and Niyanthra R of grades 11 and 10, Presidency School (Kasturinagar). They proposed a waste management app called 'Ujwala Bengaluru' which would connect citizens with the local waste management with regard to flower and food waste.

**METRO & AUTO:** Anarghya Mahesh and Nidhi Rao from Presidency School, Banashankari, mooted 'Sampoorna Samparka', an app that will have Metro schedules integrated and will show the commuters autos available on different routes from a metro station, so they can share and travel together.

**TACKLING EXCESS WATER CONSUMPTION:** Rithvik Aditya R and Hemantha R from SJR Kengeri Public School proposed higher taxes for houses for excess water consumption and for industries that release effluents, increasing water supply through atmospheric water generators, opting for permeable surfaces for roads and encouraging tap aerators.

**SUPPORT SYSTEM FOR STRAYS:** Rohini S Naik & Namratha MN from St Mark's Convent suggested a government-run animal care centre 'Suraksha' for stray dogs with support from NGOs and animal rights activists, an ambulance to transport dogs, and a sanctuary to care for them.

**CLOTHES AND LANDFILLS:** Siddarth B and Niharika Sancheti from Oakridge International School found a way to minimise the daily influx of clothes into landfills by addressing the issue at the source. They started an organisation, RFFC (Revolutionise Fast Fashion Consumption), where students collected clothes to be disposed of from users, and sorted them into usable, unusable & disposable categories.

**BEATING MENSTRUAL STIGMA:** Leticia Celin Sebastian and Srinika Mugundan, from Mitra Academy, suggested installing menstrual kits in public spaces. Additionally, they suggested a concept of public stations or period pods where a cubicle with a lady attendant is set up and has clean water, tissues, a pad dispenser and an incinerator.

DH
DECCAN HERALD



Aisshwarya D K S Hegde, convenor of Youth Leadership summit, IAS officer Shalini Rajaneesh, philanthropist-author Dr Sudha Murty and others at the 'Ideathon' competition for 'Brand Bengaluru' held as part of 'Youth Leadership summit 2023-24,' in Bengaluru on Saturday. DH PHOTO

# Innovative ideas come out of citizens of tomorrow for a better Bengaluru

## 7 schools fight it out at grand finale of Youth Ideathon

BENGALURU, DHNS

Integrating ambulances with traffic signals by wireless for seamless movement, pink booths in public places to help menstruating women, separate system for disposal of floral and vegetable waste. These are some of the ideas generated by students at inter-school Youth Ideathon 2023 for Brand Bengaluru on Saturday.

Speaking at the event, Deputy Chief Minister D K Shivakumar said, "Some excellent ideas were generated at Youth Ideathon. We will implement best ideas, including the ones on ambulances, pink booths and separate disposal mechanism for floral and vegetable wastes."

In the first stage, 50 schools were selected. The number of schools came down to 25 in the second stage. Finally, 7 schools were shortlisted for the grand finale in Bengaluru.

Shivakumar said, "The students have given some great suggestions for Brand Bengaluru through youth Ideathon."

"I will advise BBMP commissioner to organise such events at school level," he said.

"Bengaluru's strength is its weather, culture and human resources. Our government has taken measures to conserve Bengaluru's greenery. We have prepared the app 'Hasiru Rakshaka,' under which students can plant trees to increase green cover. We have decided to delegate management of parks to residents," he said.

"We have failed in many areas. There is mafia in waste disposal. Traffic congestion is worsening as 54 lakh vehicles come on to the road every day. It is difficult to widen roads and that leaves us with tunnels as only solution, though it may be expensive," he said.

Sudha Murty, former chairperson of Infosys Foundation, a jury for the finale, said, "I am very happy to see the self-confidence and thought process among kids here. As part of the jury, I have a challenge in selecting the winner."

Aisshwarya D K S Hegde, educationist and enterpreneur, actor Ramesh Arvind and others were present.

# Students come up with ideas at 'Brand B'luru' Youth Ideathon

EXPRESS NEWS SERVICE
@Bengaluru

THE inter-school Ideathon 2023 for 'Brand Bengaluru', encouraged youngsters to suggest ideas for the benefit of the city. Among the ideas were- Integrating ambulances to traffic signals wirelessly for seamless movement, pink booths in public places to help menstruating women and separate disposal of floral and vegetable waste. Deputy Chief Minister DK Shivakumar promised to implement the same.

Addressing the students he said, the ideas were excellent and that he would try to bring it to life. He opined that school students have come up with great suggestions for Brand Bengaluru. Moreover, the inter-school Ideathon 2023 and Youth Leadership Summit 2023 have been going on for a month in the city. In the first stage, 50 schools were selected from among all applicants. Further, in the second stage the number of schools narrowed down to 25. Eventually, 7 schools were shortlisted for the finale held at Hotel Conrad, Bengaluru.

ಪ್ರಜಾವಾಣಿ

**ಯುವಜನರ ನಾಯಕತ್ವ ಸಮ್ಮೇಳನ • ಐಡಿಯಾಥಾನ್ ವಿಜೇತರಿಗೆ ಪ್ರಶಸ್ತಿ**

# ‘ಐಡಿಯಾಥಾನ್ ಸಲಹೆ’ ಅನುಷ್ಠಾನ: ಡಿಸಿಎಂ

ಪ್ರಜಾವಾಣಿ ವಾರ್ತೆ



‘ಐಡಿಯಾಥಾನ್ ಸ್ಪರ್ಧೆ’ಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳೊಂದಿಗೆ ಡಿ.ಕೆ. ಶಿವಕುಮಾರ್ ಅವರ ಪುತ್ರಿ ಐಶ್ವರ್ಯ ಡಿಕೆಎಸ್ ಹೆಗ್ಡೆ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಲೇಖಕಿ ಸುಧಾಮೂರ್ತಿ

ಬೆಂಗಳೂರು: ಯುವಜನರ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್‌ನ ಸ್ಪರ್ಧೆಯಲ್ಲಿ ವ್ಯಕ್ತವಾಗಿರುವ ಸಲಹೆಗಳನ್ನುಅನುಷ್ಠಾನಗೊಳಿಸಲುಒತ್ತುನೀಡಲಾಗುವುದುಎಂದುಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಲ್ಲಿ ತಿಳಿಸಿದರು.

‘ಐಡಿಯಾಥಾನ್’ ಸ್ಪರ್ಧೆಯ ವಿಜೇತರಿಗೆ ಶನಿವಾರ ಬಹುಮಾನ ವಿತರಿಸಿ ಅವರು ಮಾತನಾಡಿದರು.

‘ಆಂಬುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್ ಜೊತೆ ವೈರ್‌ಲೆಸ್ ಸಂಪರ್ಕ, ಹೂವು– ಆಹಾರ ತ್ಯಾಜ್ಯಗಳ ವಿಲೇವಾರಿ, ಮಹಿಳೆಯರಿಗಾಗಿ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ’ ಸೇರಿ ಹಲವು ಸಲಹೆಗಳು ಬಂದಿವೆ’ ಎಂದು ತಿಳಿಸಿದರು.

‘ಬ್ರ್ಯಾಂಡ್ ಬೆಂಗಳೂರು ಯೋಜನೆ ಮೂಲಕ ನಗರದ ಸಮಸ್ಯೆಗಳಿಗೆ ಶಾಲಾ ಮಕ್ಕಳು ಐಡಿಯಾಥಾನ್ ಸ್ಪರ್ಧೆ ಮೂಲಕ ಸಲಹೆಗಳನ್ನು ನೀಡಿದ್ದಾರೆ. ಶಾಲಾ ಮಟ್ಟದಲ್ಲಿ ಇಂತಹ ಸ್ಪರ್ಧೆ ಏರ್ಪಡಿಸಲು ಬಿಬಿಎಂಪಿ ಆಯುಕ್ತರಿಗೆ ಸಲಹೆ ನೀಡುತ್ತೇನೆ. ಹೆಚ್ಚು ಆಲೋಚನೆಗಳು ಬಂದರೆ ನಮ್ಮ ನಗರ ಹೆಚ್ಚು ಸುಧಾರಣೆ, ಅಭಿವೃದ್ಧಿ ಆಗಲಿದೆ’ ಎಂದು ಹೇಳಿದರು. ‘ನಗರದ ನಿಜವಾದ ಸಂಪತ್ತು, ಶಕ್ತಿ ಎಂದರೆ ಇಲ್ಲಿನ ಹವಾಮಾನ, ಸಂಸ್ಕೃತಿ, ಮಾನವ ಸಂಪನ್ಮೂಲ.ನಾವು ಹಲವು ಕ್ಷೇತ್ರಗಳಲ್ಲಿ ವಿಫಲವಾಗಿದ್ದೇವೆ. ಕಸ ವಿಲೇವಾರಿ ಜತೆ ಮಾಫಿಯಾಗಳಿವೆ. ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿದೆ. 54 ಲಕ್ಷ ವಾಹನಗಳು ನಿತ್ಯ ರಸ್ತೆಗಿಳಿಯುತ್ತವೆ. ಇದಕ್ಕೆ ತಕ್ಕಂತೆ ರಸ್ತೆ ವಿಸ್ತರಣೆ ಸದ್ಯದ ಸ್ಥಿತಿಯಲ್ಲಿ ಅಸಾಧ್ಯ. ಅನೇಕರ ಜತೆ ಚರ್ಚೆ ನಂತರ ಸುರಂಗ ಮಾರ್ಗವೊಂದೇ ಪರಿಹಾರ ಎಂಬ ತೀರ್ಮಾನಕ್ಕೆ ಬರಲಾಗಿದೆ. ದುಬಾರಿ ಆದರೂ ಮಾಡಬೇಕಿದೆ’ ಎಂದು ಮಾಹಿತಿ ನೀಡಿದರು.

‘ನಗರದ ಸಮಸ್ಯೆ, ಸವಾಲುಗಳ ಬಗ್ಗೆ ಚರ್ಚೆ ಜೊತೆಗೆ ಸಕಾರಾತ್ಮಕ ಬದಲಾವಣೆಗೆ ಯುವಕರ ಚಿಂತನೆ, ಪರಿಕಲ್ಪನೆಗಳ ಅನ್ವೇಷಣೆ ಉದ್ದೇಶವನ್ನು ಐಡಿಯಾಥಾನ್ ಹೊಂದಿದೆ’ ಎಂದು ಡಿಕೆಶಿ ಪುತ್ರಿ ಐಶ್ವರ್ಯ ಡಿಕೆಎಸ್ ಹೆಗ್ಡೆ ತಿಳಿಸಿದರು.

‘ಮಕ್ಕಳು ಪ್ರತಿವಾರ ಸಾಮಾಜಿಕ ಚಟುವಟಿಕೆಯಲ್ಲಿ ಭಾಗವಹಿಸಬೇಕು. ಪ್ರತಿ ಎಲೆ ಔಷಧ ಗುಣ ಹೊಂದಿರುವಂತೆ ಪ್ರತಿ ಅಕ್ಷರ ಜ್ಞಾನ ಹೊಂದಿರುತ್ತದೆ. ಅಂತೆಯೇ ಪ್ರತಿ ಮಗುವಿನಲ್ಲೂ ಹೊಸ ಆಲೋಚನೆಗಳು ಇರುತ್ತವೆ’ ಎಂದು ಲೇಖಕಿ ಸುಧಾಮೂರ್ತಿ ಹೇಳಿದರು.

‘ಮನೆ ಸ್ವಚ್ಛವಾಗಿ ಇಟ್ಟುಕೊಂಡಂತೆ ರಸ್ತೆಯನ್ನು ಏಕೆ ಸ್ವಚ್ಛ ಇಟ್ಟುಕೊಂಡಿಲ್ಲ? ಪ್ರತಿಯೊಬ್ಬರಲ್ಲೂ ನಮ್ಮ ರಸ್ತೆ, ನಮ್ಮ ಬೀದಿ, ನಮ್ಮ ನಗರ ಎಂಬ ಭಾವನೆ ಬರಬೇಕು’ ಎಂದು ನಟ ರಮೇಶ್ ಅರವಿಂದ ಸಲಹೆ ಮಾಡಿದರು.

‘ಬೆಂಗಳೂರಿಗೆ ಉದ್ಯಾನನಗರಿ ಎಂಬ ಹಿರಿಮೆ ಬಂದದ್ದು ಲಾಲ್‌ಬಾಗ್, ಕಬ್ಬನ್ ಪಾರ್ಕ್‌ನಿಂದಷ್ಟೇ ಅಲ್ಲ. ಹಿಂದೆ ನಗರದ ಎಲ್ಲರ ಮನೆ ಮುಂದೆ ಉದ್ಯಾನವಿತ್ತು. ಕ್ರಮೇಣ ಮರೆಯಾದವು. ಬೆಂಗಳೂರು ಸಿಲಿಕಾನ್ ವ್ಯಾಲಿ, ಐ.ಟಿ ರಾಜಧಾನಿಯಾಯಿತು’ ಎಂದರು.

## ನ್ಯಾಷನಲ್ ಹಿಲ್ ವ್ಯೂ, ಪ್ರೆಸಿಡೆನ್ಸಿ ಶಾಲೆಗೆ ಪ್ರಶಸ್ತಿ

ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಶಾಲೆ ಹಾಗೂ ಕಸ್ತೂರಿ ನಗರದ ಪ್ರೆಸಿಡೆನ್ಸಿ ಶಾಲೆಗಳು ‘ಬ್ರ್ಯಾಂಡ್ ‘ಬೆಂಗಳೂರು ಐಡಿಯಾಥಾನ್’ ಸ್ಪರ್ಧೆಯಲ್ಲಿ ಪ್ರಶಸ್ತಿ ಪಡೆದವು. ಪ್ರಶಸ್ತಿ ವಿಜೇತ ವಿದ್ಯಾರ್ಥಿಗಳಿಗೆ ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ 40 ಗಂಟೆಗಳ ಅನ್ವೇಷಣೆ ಮತ್ತು ವ್ಯಾಪಾರೋದ್ಯಮ ಕುರಿತ ಕಾರ್ಯಕ್ರಮಕ್ಕೆ ಸ್ಕಾಲರ್ ಶಿಪ್ ನೀಡಲಾಗುವುದು ಎಂದು ಪ್ರಕಟಿಸಲಾಯಿತು. ಲೇಖಕಿ ಸುಧಾಮೂರ್ತಿ, ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಡಾ.ಅನೂಪ್ ನಾಯಕ್, ಜಿ.ಬಾಲಸುಬ್ರಮಣಿಯನ್, ರಮೇಶ್ ಜೂಡ್ ಥಾಮಸ್ ಅವರು ತೀರ್ಪುಗಾರರಾಗಿದ್ದರು.

ಕನ್ನಡಪ್ರಭ

# ‘ಐಡಿಯಾಥಾನ್ ಸಲಹೆ ಅನುಷ್ಠಾನ’

## ಡಿಸಿಎಂ ಡಿಕೆಶಿ ಹೇಳಿಕೆ | ಬ್ರ್ಯಾಂಡ್ ಬೆಂಗಳೂರಿಗೆ ಮಕ್ಕಳ ಐಡಿಯಾಗಳು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಆ್ಯಂಬುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್‌ಗಳ ಜೊತೆ ವೈರ್‌ಲೆಸ್ ಸಂಪರ್ಕ, ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ, ಹೂವು ಮತ್ತು ಆಹಾರ ತ್ಯಾಜ್ಯಗಳ ಸಮರ್ಪಕ ವಿಲೇವಾರಿ ಸೇರಿ ಐಡಿಯಾಥಾನ್ ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಅನುಷ್ಠಾನ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಹೇಳಿದ್ದಾರೆ.

ನಗರದಲ್ಲಿ ಶನಿವಾರ ನಡೆದ ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಡಿ.ಕೆ. ಶಿವಕುಮಾರ್ ಅವರು, ಬ್ರ್ಯಾಂಡ್ ಬೆಂಗಳೂರು ಯೋಜನೆ ಮೂಲಕ ಬೆಂಗಳೂರಿನ ಸಮಸ್ಯೆಗಳಿಗೆ ಶಾಲಾ ಮಕ್ಕಳು ಐಡಿಯಾಥಾನ್ ಸ್ಪರ್ಧೆ ಮೂಲಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ ಎಂದರು.



ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಟ ರಮೇಶ್ ಅರವಿಂದ್ ಅವರು ಐಡಿಯಾಥಾನ್ ಸ್ಪರ್ಧೆಯ ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಐಶ್ವರ್ಯ ಡಿ.ಕೆ.ಎಸ್. ಉಪಸ್ಥಿತರಿದ್ದರು.

ಇನ್ಫೋಸಿಸ್ ಫೌಂಡೇಶನ್ ಸಂಸ್ಥಾಪಕಿ ಸುಧಾ ಮೂರ್ತಿ ಮಾತನಾಡಿ, ಪ್ರತಿ ಮಗುವಿನಲ್ಲೂ ಹೊಸ ಆಲೋಚನೆಗಳು ಇರುತ್ತವೆ. ಸ್ಪರ್ಧೆಯಲ್ಲಿ ತಮ್ಮ ಆಲೋಚನೆ ವ್ಯಕ್ತಪಡಿಸಿದ ಮಕ್ಕಳ ಆತ್ಮವಿಶ್ವಾಸ ಕಂಡು ಸಂತೋಷವಾಗಿದೆ ಎಂದು ತಿಳಿಸಿದರು. ಐಡಿಯಾಥಾನ್ ಪರಿಕಲ್ಪನೆ ಹುಟ್ಟುಹಾಕಿ ಕಾರ್ಯರೂಪಕ್ಕೆ ತಂದ ಐಶ್ವರ್ಯ ಡಿ.ಕೆ.ಎಸ್ ಮಾತನಾಡಿದರು.

**ವಿಜೇತ ಶಾಲೆಗಳು:** ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಶಾಲೆ ಹಾಗೂ ಕಸ್ತೂರಿ ನಗರದ ಪ್ರೆಸಿಡೆನ್ಸಿ ಶಾಲೆಗಳು ಐಡಿಯಾಥಾನ್ ಸ್ಪರ್ಧೆಯ ವಿಜೇತರಾಗಿ ಹೊರಹೊಮ್ಮಿವೆ.

# ಮಕ್ಕಳ ಹೊಸ ಆಲೋಚನೆಗಳಿಗೆ ಐಡಿಯಾಥಾನ್ ವೇದಿಕೆ: ಸುಧಾ

## ಡಿಕೆಶಿ ಪುತ್ರಿ ಐಶ್ವರ್ಯಾ ಪರಿಕಲ್ಪನೆಗೆ ಇನ್ಫೋಸಿಸ್ ಫೌಂಡೇಶನ್ ಮುಖ್ಯಸ್ಥೆ ಶ್ಲಾಘನೆ

## 'ಬ್ರ್ಯಾಂಡ್ ಬೆಂಗಳೂರು' ಕುರಿತ ಸ್ಪರ್ಧೆಗಳ ಆಯೋಜನೆ | 200 ಶಾಲೆಗಳು ಭಾಗಿ

■ ಉದಯವಾಣಿ ಸಮಾಚಾರ

**ಬೆಂಗಳೂರು:** ಪ್ರತಿ ಎಲೆಯೂ ಔಷಧಿ ಗುಣ ಹೊಂದಿರುವಂತೆ ಪ್ರತಿ ಅಕ್ಷರವೂ ಜ್ಞಾನ ಹೊಂದಿರುತ್ತದೆ. ಅದೇ ರೀತಿ ಪ್ರತಿ ಮಗುವಿನಲ್ಲೂ ಹೊಸ ಆಲೋಚನೆಗಳು ಇರುತ್ತವೆ ಎಂದು ಇನ್ಫೋಸಿಸ್ ಫೌಂಡೇಷನ್ ಮುಖ್ಯಸ್ಥೆ ಸುಧಾಮೂರ್ತಿ ಹೇಳಿದರು.

ಐಶ್ವರ್ಯ ಡಿಕೆಎಸ್ ಹೆಗ್ಡೆ ಅವರ ನೇತೃತ್ವದಲ್ಲಿ ಶನಿವಾರ ಖಾಸಗಿ ಹೋಟೆಲ್‌ನಲ್ಲಿ ಹಮ್ಮಿಕೊಂಡಿದ್ದ 'ಯುವ ನಾಯಕತ್ವ ಸಮ್ಮೇಳನ 2023-24' ಹಾಗೂ ಕರ್ನಾಟಕ ಸರ್ಕಾರದ 'ಬ್ರ್ಯಾಂಡ್ ಬೆಂಗಳೂರು ಕುರಿತ ಶಾಲಾ ಮಟ್ಟದ 'ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತು' ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರತಿ ಎಲೆಯೂ ಔಷಧಿ ಗುಣ ಹೊಂದಿರುವಂತೆ ಪ್ರತಿ ಅಕ್ಷರವೂ ಜ್ಞಾನ ಹೊಂದಿರುತ್ತದೆ. ಅದೇ ರೀತಿ ಪ್ರತಿ ಮಗುವಿನಲ್ಲೂ ಹೊಸ ಆಲೋಚನೆಗಳು ಇರುತ್ತವೆ. ಇಂತಹ ಆಲೋಚನೆಗಳಿಗೆ ವೇದಿಕೆ ಕಲ್ಪಿಸಿರುವ ಐಶ್ವರ್ಯ ಅವರಿಗೆ ಅಭಿನಂದನೆಗಳು ಎಂದು ಶ್ಲಾಘಿಸಿದರು.

ಯುವ ಪೀಳಿಗೆಯಿಂದ ನಾನು ಕೆಲವು ವಿಚಾರ ಕಲಿಯುವಂತಾಗಿದೆ. ತಮ್ಮ ಆಲೋಚನೆ ವ್ಯಕ್ತಪಡಿಸಿದ ಮಕ್ಕಳ ಆತ್ಮವಿಶ್ವಾಸ ಕಂಡು ಸಂತೋಷವಾಗಿದೆ. ಇಲ್ಲಿನ ಮಕ್ಕಳ ಸಲಹೆಗಳನ್ನು ತೀರ್ಪುಗಾರರಾಗಿ ಆಯ್ಕೆ ಮಾಡುವುದು ನಿಜಕ್ಕೂ ಸವಾಲಿನ ಕೆಲಸ. ಮಕ್ಕಳು ವಾರಕ್ಕೊಮ್ಮೆ ಸಾಮಾಜಿಕ ಚಟುವಟಿಕೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

**ನಮ್ಮ ನಗರ ಎಂಬ ಭಾವನೆ ಬರಬೇಕು:** ನಟ ರಮೇಶ್ ಅರವಿಂದ್ ಮಾತನಾಡಿ, ಬೆಂಗಳೂರು ಉದ್ಯಾನ ನಗರಿ. ಈ ಕೀರ್ತಿ ಬಂದಿದ್ದು ಕೇವಲ ಲಾಲ್ ಬಾಗ್ ಹಾಗೂ ಕಬ್ಬನ್ ಪಾರ್ಕ್‌ನಿಂದ ಮಾತ್ರವಲ್ಲ, ಈ ಹಿಂದೆ ಎಲ್ಲರ ಮನೆ ಮುಂದೆ ಉದ್ಯಾನವನವಿತ್ತು. ನಂತರ ಕ್ರಮೇಣ ಅವು ಮರೆಯಾದವು. ನಾವು ನಮ್ಮ ಮನೆ ಸ್ವಚ್ಛವಾಗಿ ಇಟ್ಟುಕೊಂಡಂತೆ ರಸ್ತೆಯನ್ನು ಯಾಕೆ ಸ್ವಚ್ಛ ಇಟ್ಟುಕೊಂಡಿಲ್ಲ ಎಂದು ಹೇಳಿದರು.

**ಭಾವನಾತ್ಮಕ ಸಂಬಂಧದ ಬ್ರ್ಯಾಂಡ್ ಬೆಂಗಳೂರು:** ಐಶ್ವರ್ಯ ಡಿಕೆಎಸ್ ಹೆಗ್ಡೆ ಮಾತನಾಡಿ, ಬೆಂಗಳೂರು ನಮ್ಮ ಪಾಲಿಗೆ ಭಾವನಾತ್ಮಕ ಸಂಬಂಧದ ಬ್ರ್ಯಾಂಡ್ ಆಗಿದೆ. ನಮ್ಮ ನಗರ ಅನೇಕ ಸಮಸ್ಯೆಗಳನ್ನು ಹೊಂದಿದ್ದರೂ, ತನ್ನ ಜ್ಞಾನ ಹಾಗೂ ಉದ್ಯಮ ಕೌಶಲ್ಯಕ್ಕೆ ಹೆಸರುವಾಸಿಯಾಗಿದೆ. ನಮ್ಮ ನಗರ ಎಲ್ಲರನ್ನೂ ತನ್ನವರೆಂದು ಒಳಗೊಳ್ಳುವ ಅವಕಾಶ ಕಲ್ಪಿಸುತ್ತದೆ. ಮಿತ್ರಾ ಅಕಾಡೆಮಿಯ ಮಕ್ಕಳು ಋತುಸ್ರಾವ ಸಮಯದಲ್ಲಿ ಮಹಿಳೆಯರ ಸಮಸ್ಯೆಗೆ ಪರಿಹಾರವಾಗಿ ಕೊಟ್ಟ ಸಲಹೆ ನನ್ನ ಮನಸ್ಸನ್ನು ಸೆಳೆದಿದೆ. ನಾನು ನಾಲ್ಕೈದು ಸಂಸ್ಥೆಗಳ ಜವಾಬ್ದಾರಿ ಹೊತ್ತಿದ್ದು, ನನ್ನ ಶಿಕ್ಷಣ ಸಂಸ್ಥೆಗಳು ಹಾಗೂ ಮಾಲ್‌ಗಳಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರುತ್ತೇನೆ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.





ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತಿನಲ್ಲಿ ವಿಜೇತರಾದವರಿಗೆ ಇನ್ಫೋಸಿಸ್ ಫೌಂಡೇಷನ್ ಮುಖ್ಯಸ್ಥೆ ಸುಧಾಮೂರ್ತಿ, ಡಿಸಿಎಂ ಡಿ.ಕೆ.ಶಿವಕುಮಾರ್ ಪ್ರಶಸ್ತಿ ಪತ್ರ ವಿತರಿಸಿದರು.

### ಸ್ಪರ್ಧೆಯ ಅತ್ಯುತ್ತಮ ಸಲಹೆಗಳು ಜಾರಿ: ಡಿಕೆಶಿ

ಆಂಬುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್‌ಗಳ ಜೊತೆ ವೈಯರ್ ಲೆಸ್ ಸಂಪರ್ಕ, ಋತುಸ್ರಾವ ಮಹಿಳೆಯರ ಅನುಕೂಲಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ, ಸಮಾರಂಭಗಳಲ್ಲಿ ಬಳಸಿದ ಹೂವು ಮತ್ತು ಆಹಾರ ತ್ಯಾಜ್ಯಗಳ ಸಮರ್ಪಕ ವಿಲೇವಾರಿ ಸೇರಿ ಐಡಿಯಾಥಾನ್ ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಜಾರಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತಿನಲ್ಲಿ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿ, ಶಾಲಾ ಮಟ್ಟದಲ್ಲಿ ಇಂತಹ ಸ್ಪರ್ಧೆ ಏರ್ಪಡಿಸಲು ಬಿಬಿಎಂಪಿ ಆಯುಕ್ತರಿಗೆ ಸಲಹೆ ನೀಡುತ್ತೇನೆ. ಬೆಂಗಳೂರಿನ ಹಸಿರು ರಕ್ಷಣೆಗೆ ಸರ್ಕಾರ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಶಾಲಾ ಮಕ್ಕಳಿಂದ ಗಿಡ ನೆಟ್ಟು, ಬೆಳೆಸುವ ಜವಾಬ್ದಾರಿ ನೀಡಲಾಗುವುದು. ಇದಕ್ಕಾಗಿ ಆ್ಯಪ್ ಸಿದ್ಧಪಡಿಸಿದ್ದು ಮಕ್ಕಳು ತಮ್ಮ ಗಿಡದ ಬೆಳವಣಿಗೆ ಮಾಹಿತಿಯನ್ನು ಅಪ್ಲೋಡ್ ಮಾಡಬಹುದಾಗಿದೆ ಎಂದರು.

### ನ್ಯಾಷನಲ್ ಹಿಲ್ ವ್ಯೂ, ಪ್ರೆಸಿಡೆನ್ಸಿ ಶಾಲೆಗೆ ಪ್ರಶಸ್ತಿ

ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಶಾಲೆ ಹಾಗೂ ಕಸ್ತೂರಿ ನಗರದ ಪ್ರೆಸಿಡೆನ್ಸಿ ಶಾಲೆಗಳು ಬ್ರಾಂಡ್ ಬೆಂಗಳೂರು ಐಡಿಯಾಥಾನ್ ಸ್ಪರ್ಧೆಯ ವಿಜೇತರಾಗಿ ಹೊರಹೊಮ್ಮಿವೆ. ಪ್ರಶಸ್ತಿ ವಿಜೇತ ವಿದ್ಯಾರ್ಥಿಗಳಿಗೆ ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ನಡೆಯುವ 40 ಗಂಟೆಗಳ ಅನ್ವೇಷಣೆ ಮತ್ತು ವ್ಯಾಪಾರೋದ್ಯಮ ಕುರಿತ ಕಾರ್ಯಕ್ರಮಕ್ಕೆ ಸ್ಕಾಲರ್ ಶಿಪ್ ಅನ್ನು ನೀಡಲಾಗುವುದು. ಕಳೆದ ವರ್ಷ ನ.14ರಂದು ಆರಂಭವಾದ ಈ ಸ್ಪರ್ಧೆಯಲ್ಲಿ ಒಟ್ಟು 200 ಶಾಲೆಗಳು ಭಾಗವಹಿಸಿವೆ.

# ವಿಜಯವಾಣಿ

ನಂ.1


# ಆಹಾರ, ಹೂತ್ಯಾಜ್ಯ ಸಮರ್ಪಕ ವಿಲೇಗೆ ನಿಗಾ

## ಐಡಿಯಾಥಾನ್ ಸಲಹೆಗಳ ಅನುಷ್ಠಾನಕ್ಕೆ ಆದ್ಯತೆ | ಡಿಸಿಎಂ ಹೇಳಿಕೆ | ಸ್ಪರ್ಧೆ ವಿಜೇತರಿಗೆ ಬಹುಮಾನ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬಳಸಿದ ಹೂವು ಹಾಗೂ ಆಹಾರ ತ್ಯಾಜ್ಯಗಳ ವಿಲೇವಾರಿ, ಮಹಿಳೆಯರ ಅನುಕೂಲಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ ಸೇರಿ 'ಐಡಿಯಾಥಾನ್' ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಜಾರಿ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ನಗರದಲ್ಲಿ ಶನಿವಾರ ಆಯೋಜಿಸಿದ ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದರು. 'ಬ್ರ್ಯಾಂಡ್ ಬೆಂಗಳೂರು' ಯೋಜನೆ ಮೂಲಕ ಮಹಾನಗರದ ಸಮಸ್ಯೆಗಳಿಗೆ ಶಾಲಾಮಕ್ಕಳು ಉತ್ತಮ ಸಲಹೆಗಳನ್ನು ನೀಡಿದ್ದಾರೆ. ದೇಶದ ಬೆಳವಣಿಗೆಗೆ ಮಕ್ಕಳ ಆಲೋಚನೆ, ಸಲಹೆಗಳು ಅತ್ಯಗತ್ಯ. ಮಕ್ಕಳಲ್ಲೂ ನಾಯಕತ್ವ ಗುಣ ಇರುತ್ತದೆ ಎಂದರು.

ಬೆಂಗಳೂರು ಯೋಜಿತ ನಗರವಲ್ಲ. ಈ ನಗರಕ್ಕೆ ದೂರದೃಷ್ಟಿ ಆಲೋಚನೆಗಳು, ನೀತಿಗಳು ಬಹಳ ಮುಖ್ಯ. ಸಂಚಾರದಟ್ಟಣೆ, ಕಸ ವಿಲೇವಾರಿ ಪ್ರಮುಖ ಸಮಸ್ಯೆಗಳಾಗಿವೆ. ಇವಕ್ಕೆ ಮಕ್ಕಳು ತಮ್ಮ ಆಲೋಚನೆ ಮೂಲಕ ಪರಿಹಾರ ನೀಡಲು ಮುಂದಾಗಿದ್ದಾರೆ. ಶಾಲಾ ಮಟ್ಟದಲ್ಲಿ ಇಂತಹ ಸ್ಪರ್ಧೆ ಏರ್ಪಡಿಸಲು ಬಿಬಿಎಂಪಿ ಆಯುಕ್ತರಿಗೆ ಸಲಹೆ ನೀಡುತ್ತೇನೆ. ಹೆಚ್ಚೆಚ್ಚು ಆಲೋಚನೆಗಳು ಬಂದಂತೆ ನಮ್ಮ ನಗರ ಸುಧಾರಣೆಯತ್ತ ಹೆಜ್ಜೆಹಾಕಲು ಸಾಧ್ಯವಾಗಲಿದೆ ಎಂದು ಹೇಳಿದರು.

**ಗಿಡಗಳ ಪೋಷಣೆಗೆ ಆ್ಯಪ್:** ಬೆಂಗಳೂರಿನ ನಿಜವಾದ ಸಂಪತ್ತು ಎಂದರೆ ಇಲ್ಲಿನ ಹವಾಮಾನ, ಸಂಸ್ಕೃತಿ ಹಾಗೂ ಮಾನವ ಸಂಪನ್ಮೂಲ. ನಗರದ ಹಸಿರು ರಕ್ಷಣೆಗೆ ಸರ್ಕಾರ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಶಾಲಾಮಕ್ಕಳಿಗೆ ಗಿಡ ನೆಟ್ಟು, ಬೆಳೆಸುವ ಜವಾಬ್ದಾರಿ ವಹಿಸಲಾಗುವುದು. ಇದಕ್ಕಾಗಿ ಆ್ಯಪ್ ಸಿದ್ಧಪಡಿಸಿದ್ದು, ಮಕ್ಕಳು ತಮ್ಮ ಗಿಡದ ಬೆಳವಣಿಗೆ ಮಾಹಿತಿಯನ್ನು ಅಪ್‌ಲೋಡ್ ಮಾಡಬಹುದು. ನಗರದ ಉದ್ಯಾನವನಗಳ ನಿರ್ವಹಣೆ ಜವಾಬ್ದಾರಿಯನ್ನೂ ಸ್ಥಳೀಯ ನಾಗರಿಕರಿಗೆ ವಹಿಸಲಾಗುವುದು ಎಂದು ಡಿಕೆಶಿ ವಿವರಿಸಿದರು.



ನಗರದಲ್ಲಿ ಆಯೋಜಿಸಿದ್ದ ಐಡಿಯಾಥಾನ್ ಸ್ಪರ್ಧೆ ವಿಜೇತರಿಗೆ ಡಿ.ಕೆ. ಶಿವಕುಮಾರ್ ಬಹುಮಾನ ವಿತರಿಸಿದರು. ರಮೇಶ್ ಅರವಿಂದ್ ಮತ್ತಿತರರಿದ್ದರು.

> ಪ್ರತಿ ಎಲೆಯೂ ಔಷಧ ಗುಣ ಹೊಂದಿರುವಂತೆ ಪ್ರತಿ ಅಕ್ಷರವೂ ಜ್ಞಾನ ಹೊಂದಿರುತ್ತದೆ. ಅದೇ ರೀತಿ ಪ್ರತಿ ಮಗುವಿನಲ್ಲೂ ಹೊಸ ಆಲೋಚನೆಗಳು ಇರುತ್ತವೆ. ಇಂತಹ ಆಲೋಚ ನೆಗಳಿಗೆ ವೇದಿಕೆ ಒದಗಿಸುವುದು ಹಿರಿಯ ಕರ್ತವ್ಯ. ಮಕ್ಕಳು ವಾರಕ್ಕೊಮ್ಮೆ ಸಾಮಾಜಿಕ ಚಟುವಟಿಕೆಯಲ್ಲಿ ಪಾಲ್ಗೊಳ್ಳುವುದು ಅಗತ್ಯ.
>
> | ಡಾ. ಸುಧಾಮೂರ್ತಿ
>
> ಇನ್ಫೋಸಿಸ್ ಪ್ರತಿಷ್ಠಾನದ ಮಾಜಿ ಮುಖ್ಯಸ್ಥೆ

> ಬೆಂಗಳೂರು ನಮ್ಮ ಪಾಲಿಗೆ ಭಾವನಾತ್ಮಕ ಸಂಬಂಧದ ಬ್ರ್ಯಾಂಡ್ ಆಗಿದೆ. ಈ ನಗರ ಅನೇಕ ಸಮಸ್ಯೆಗಳನ್ನು ಹೊಂದಿದ್ದರೂ ಜ್ಞಾನ, ಉದ್ಯಮ ಕೌಶಲಕ್ಕೆ ಹೆಸರುವಾಸಿಯಾಗಿದೆ. ಶಾಲಾಮಕ್ಕಳು ನಗರದ ಭವಿಷ್ಯದ ನಿರ್ಮಾಣದಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಚಾರ. ಅವರು ವಿದ್ಯಾರ್ಥಿಗಳಾಗಿ ಬಾರದೆ ಜವಾಬ್ದಾರಿಯುತ ನಾಗರಿಕರಾಗಿ ಭಾಗವಹಿಸಿರುವುದು ಶ್ಲಾಘನೀಯ.
>
> | ಐಶ್ವರ್ಯ ಡಿಕೆಎಸ್ ಹೆಗ್ಡೆ
>
> ಐಡಿಯಾಥಾನ್ ಸಂಚಾಲಕಿ

### ಹೊಸ ಆಲೋಚನೆ ಆವಿಷ್ಕಾರಕ್ಕೆ ದಾರಿ

ಬೆಂಗಳೂರಿನಲ್ಲಿ ಈ ಹಿಂದೆ ಎಲ್ಲರ ಮನೆ ಮುಂದೆ ಕಿರು ಉದ್ಯಾನವಿತ್ತು. ಇವು ನಂತರ ಕ್ರಮೇಣ ಮರೆಯಾದವು. ನಾವು ನಮ್ಮ ಮನೆಯನ್ನು ಸ್ವಚ್ಛವಾಗಿ ಇಟ್ಟುಕೊಂಡಂತೆ ರಸ್ತೆಯನ್ನು ಯಾಕೆ ಸ್ವಚ್ಛವಾಗಿ ಇಟ್ಟುಕೊಂಡಿಲ್ಲ? ಪ್ರತಿಯೊಬ್ಬ ನಾಗರಿಕರಲ್ಲೂ ನಮ್ಮ ರಸ್ತೆ, ನಮ್ಮ ಬೀದಿ, ನಮ್ಮ ನಗರ ಎಂಬ ಭಾವನೆ ಬರಬೇಕು. ನಮ್ಮ ನಗರದಲ್ಲಿ ಸಂಭ್ರಮಿಸಲು ಅನೇಕ ವಿಚಾರಗಳಿವೆ. ನಾವು ಎಲ್ಲ ಆಲೋಚನೆಗಳನ್ನು ಸ್ವಾಗತಿಸಬೇಕು. ಇಂತಹ ಆಲೋಚನೆಗಳೇ ಹೊಸ ಆವಿಷ್ಕಾರಕ್ಕೆ ದಾರಿ ಮಾಡಿಕೊಡುತ್ತವೆ ಎಂದು ನಟ ರಮೇಶ್ ಅರವಿಂದ್ ಹೇಳಿದರು.


Bengaluru Edition
Jan 14, 2024 Page No. 5
Powered by : eReleGo.com

## ಬ್ರ್ಯಾಂಡ್ ಬೆಂಗಳೂರು ಯೋಜನೆಗೆ ಶಾಲಾ ವಿದ್ಯಾರ್ಥಿಗಳ ಸಲಹೆ

# ಸುಗಮ ಸಂಚಾರಕ್ಕೆ ವೈರ್‌ಲೆಸ್ ಸಂಪರ್ಕ



ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತಿನಲ್ಲಿ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ನಟ ರಮೇಶ್ ಅರವಿಂದ್ ಪ್ರಮಾಣ ಪತ್ರ ನೀಡಿದರು.

■ **ವಿಕ ಸುದ್ದಿಲೋಕ** ಬೆಂಗಳೂರು

''ಆಂಬ್ಯುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್‌ಗಳ ಜತೆ ವೈರ್‌ಲೆಸ್ ಸಂಪರ್ಕ, ಋತುಸ್ರಾವವಾಗಿರುವ ಮಹಿಳೆಯರ ಅನುಕೂಲಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ, ಸಮಾರಂಭಗಳಲ್ಲಿ ಬಳಸಿದ ಹೂವು ಮತ್ತು ಆಹಾರ ತ್ಯಾಜ್ಯಗಳ ಸಮರ್ಪಕ ವಿಲೇವಾರಿ ಸೇರಿ ಐಡಿಯಾಥಾನ್ ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಜಾರಿ ಮಾಡಲಾಗುವುದು,'' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

**ಐಡಿಯಾಥಾನ್ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ**

ನಗರದಲ್ಲಿ ಕಳೆದೊಂದು ತಿಂಗಳಿಂದ ನಡೆದ ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತಿನಲ್ಲಿ ವಿಜೇತರಿಗೆ ಶನಿವಾರ ಬಹುಮಾನ ವಿತರಿಸಿ ಅವರು ಮಾತನಾಡಿದರು.

''ಬ್ರ್ಯಾಂಡ್ ಬೆಂಗಳೂರು ಯೋಜನೆಗೆ ಬೆಂಗಳೂರಿನ ಶಾಲಾ ಮಕ್ಕಳು ಈ ಐಡಿಯಾಥಾನ್ ಸ್ಪರ್ಧೆ ಮೂಲಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ. ಶಾಲಾ ಮಟ್ಟದಲ್ಲಿ ಇಂತಹ ಸ್ಪರ್ಧೆ ಏರ್ಪಡಿಸಲು ಬಿಬಿಎಂಪಿ ಆಯುಕ್ತರಿಗೆ ಸಲಹೆ ನೀಡುತ್ತೇನೆ. ಹೆಚ್ಚೆಚ್ಚು ಆಲೋಚನೆಗಳು ಬಂದಂತೆ ನಮ್ಮ ನಗರ ಹೆಚ್ಚೆಚ್ಚು ಸುಧಾರಣೆ, ಅಭಿವೃದ್ಧಿ ಆಗುತ್ತದೆ. ನಗರಕ್ಕೆ ದೂರದೃಷ್ಟಿ ಆಲೋಚನೆಗಳು, ನೀತಿಗಳು ಬಹಳ ಮುಖ್ಯ. ಸಂಚಾರ ದಟ್ಟಣೆ, ಕಸ ವಿಲೇವಾರಿ ಪ್ರಮುಖ ಸಮಸ್ಯೆಗಳಾಗಿವೆ. ಇವುಗಳಿಗೆ ಮಕ್ಕಳು ತಮ್ಮ ಆಲೋಚನೆಗಳ ಮೂಲಕ ಪರಿಹಾರ ನೀಡಲು ಮುಂದಾಗಿದ್ದಾರೆ,'' ಎಂದರು.

ಐಶ್ವರ್ಯ ಡಿಕೆಎಸ್ ಹೆಗ್ಡೆ ಮಾತನಾಡಿ, ''ಮಿತ್ರಾ ಅಕಾಡೆಮಿ ಮಕ್ಕಳು ಋತುಸ್ರಾವ ಸಮಯದಲ್ಲಿನ ಮಹಿಳೆಯರ ಸಮಸ್ಯೆಗೆ ಪರಿಹಾರವಾಗಿ ಕೊಟ್ಟ ಸಲಹೆ ನನ್ನ ಮನಸ್ಸನ್ನು ಸೆಳೆದಿದೆ. ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ವ್ಯವಸ್ಥೆ ಆಲೋಚನೆ ನಿಜಕ್ಕೂ ಶ್ಲಾಘನೀಯ. ನಾನು ನಾಲ್ಕೈದು ಸಂಸ್ಥೆಗಳ ಜವಾಬ್ದಾರಿ ಹೊತ್ತಿದ್ದು, ನನ್ನ ಶಿಕ್ಷಣ ಸಂಸ್ಥೆಗಳು ಹಾಗೂ ಮಾಲ್‌ಗಳಲ್ಲಿ ಈ ವ್ಯವಸ್ಥೆ ಜಾರಿಗೆ ತರಲಾಗುವುದು,'' ಎಂದು ಭರವಸೆ ನೀಡಿದರು.

ಇನ್ಫೋಸಿಸ್‌ನ ಸುಧಾಮೂರ್ತಿ ಮಾತನಾಡಿ, ''ಕೆಲವಂ ಬಲ್ಲವರಿಂದ ಕಲ್ತು, ಕೆಲವಂ ಶಾಸ್ತ್ರಂಗಳಂ ಕೇಳುತುಂ, ಕೆಲವಂ ಮಾಳ್ಪವರಿಂದ ಕಂಡು, ಕೆಲವಂ ಸುಜ್ಞಾನದಿಂ ನೋಡುತುಂ, ಕೆಲವಂ ಸಜ್ಜನ ಸಂಗದಿಂದಲರಿಯಲ್' ಎಂಬ ವಚನದಂತೆ ಇಂದು ಯುವ ಪೀಳಿಗೆಯಿಂದ ನಾನು ಕೆಲವು ವಿಚಾರ ಕಲಿತೆ,'' ಎಂದು ಹೇಳಿದರು.

ನಟ ರಮೇಶ್ ಅರವಿಂದ್ ಮಾತನಾಡಿ, ''ನಾವು ನಮ್ಮ ಮನೆ ಸ್ವಚ್ಛವಾಗಿ ಇಟ್ಟುಕೊಂಡಂತೆ ರಸ್ತೆಯನ್ನು ಯಾಕೆ ಸ್ವಚ್ಛ ಇಟ್ಟುಕೊಂಡಿಲ್ಲ, ಪ್ರತಿಯೊಬ್ಬ ನಾಗರಿಕರಲ್ಲೂ ನಮ್ಮ ರಸ್ತೆ, ನಮ್ಮ ಬೀದಿ, ನಮ್ಮ ಏರಿಯಾ, ನಮ್ಮ ನಗರ ಎಂಬ ಭಾವನೆ ಬರಬೇಕು. ನಮ್ಮ ನಗರದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು,'' ಎಂದು ಮನವಿ ಮಾಡಿದರು.

### ನ್ಯಾಷನಲ್ ಹಿಲ್ ವ್ಯೂ, ಪ್ರೆಸಿಡೆನ್ಸಿ ಶಾಲೆಗೆ ಪ್ರಶಸ್ತಿ

ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಶಾಲೆ ಹಾಗೂ ಕಸ್ತೂರಿ ನಗರದ ಪ್ರೆಸಿಡೆನ್ಸಿ ಶಾಲೆಗಳು ಬ್ರ್ಯಾಂಡ್ ಬೆಂಗಳೂರು ಐಡಿಯಾಥಾನ್ ಸ್ಪರ್ಧೆಯ ವಿಜೇತರಾಗಿ ಹೊರಹೊಮ್ಮಿವೆ.

ಶನಿವಾರ ನಡೆದ ಅಂತಿಮ ಸುತ್ತಿನ ಸ್ಪರ್ಧೆಯಲ್ಲಿ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ನಟ ರಮೇಶ್ ಅರವಿಂದ್ ಪ್ರಮಾಣ ಪತ್ರ ನೀಡಿದರು. ಪ್ರಶಸ್ತಿ ವಿಜೇತ ವಿದ್ಯಾರ್ಥಿಗಳಿಗೆ ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ನಡೆಯುವ 40 ಗಂಟೆಗಳ ಅನ್ವೇಷಣೆ ಮತ್ತು ವ್ಯಾಪಾರೋದ್ಯಮ ಕುರಿತ ಕಾರ್ಯಕ್ರಮಕ್ಕೆ ಸ್ಕಾಲರ್‌ಶಿಪ್ ನೀಡಲಾಗುವುದು.

ಕಳೆದ ನವೆಂಬರ್ 14ರಂದು ಆರಂಭವಾದ ಈ ಸ್ಪರ್ಧೆಯಲ್ಲಿ ಒಟ್ಟು 200 ಶಾಲೆಗಳು ಭಾಗವಹಿಸಿದ್ದು, ಅಂತಿಮ ಸುತ್ತಿಗೆ ಪ್ರಮುಖ 7 ಶಾಲೆಗಳನ್ನು ಆಯ್ಕೆ ಮಾಡಲಾಗಿತ್ತು. ಅಂತಿಮ ಸುತ್ತಿನ ಸ್ಪರ್ಧೆಯಲ್ಲಿ ಬನಶಂಕರಿಯ ಪ್ರೆಸಿಡೆನ್ಸಿ ಶಾಲೆ, ಎಸ್‌ಜೆಆರ್ ಕೆಂಗೇರಿ ಪಬ್ಲಿಕ್ ಶಾಲೆ, ಒಕ್ರಿಡ್ಜ್ ಇಂಟರ್ ನ್ಯಾಷನಲ್ ಶಾಲೆ, ಸೇಂಟ್ ಮಾರ್ಕ್ಸ್ ಕಾನ್ವೆಂಟ್, ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಪಬ್ಲಿಕ್ ಶಾಲೆ, ಮಿತ್ರಾ ಅಕಾಡೆಮಿ, ಕಸ್ತೂರಿನಗರದ ಪ್ರೆಸಿಡೆನ್ಸಿ ಶಾಲೆಗಳು ಭಾಗವಹಿಸಿದ್ದವು.

ಲೇಖಕಿ ಸುಧಾಮೂರ್ತಿ, ರಾಜ್ಯ ಸರಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಡಾ. ಅನೂಪ್ ನಾಯಕ್, ಜಿ. ಬಾಲಸುಬ್ರಮಣಿಯನ್, ರಮೇಶ್ ಜೂಡ್ ಥಾಮಸ್ ಅಂತಿಮ ಸುತ್ತಿನ ತೀರ್ಪುಗಾರರಾಗಿದ್ದರು.

ಸಂಯುಕ್ತ ಕರ್ನಾಟಕ

# ಆಂಬುಲೆನ್ಸ್ ಸಂಚಾರಕ್ಕೆ ವೈರ್‌ಲೆಸ್ ಸಂಪರ್ಕ

- ಋತುಸ್ರಾವ ಮಹಿಳೆಯರಿಗೆ ಪಿಂಕ್ ಬೂತ್ ಸ್ಥಾಪನೆ
- ಸಂಚಾರ ದಟ್ಟಣೆ ತಪ್ಪಿಸಲು ಸುರಂಗ ರಸ್ತೆ ಪರಿಹಾರ

**ಬೆಂಗಳೂರು:** ನಗರದಲ್ಲಿ ಆಂಬುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್‌ಗಳ ಜೊತೆ ವೈರ್‌ಲೆಸ್ ಸಂಪರ್ಕ ವ್ಯವಸ್ಥೆ ಮಾಡುವುದು, ಋತುಸ್ರಾವ ಮಹಿಳೆಯರ ಅನುಕೂಲಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ ಸಂಬಂಧ ಐಡಿಯಾಥಾನ್ ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಜಾರಿ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಕಳೆದ ಒಂದು ತಿಂಗಳಿಂದ ನಡೆದ ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ಬ್ರ್ಯಾಂಡ್ ಬೆಂಗಳೂರು ಯೋಜನೆ ಮೂಲಕ ಬೆಂಗಳೂರಿನ ಸಮಸ್ಯೆಗಳಿಗೆ ಶಾಲಾಮಕ್ಕಳು ಉತ್ತಮ ಸಲಹೆಗಳನ್ನು ನೀಡಿದ್ದಾರೆ. ಶಾಲಾಮಟ್ಟದಲ್ಲಿ ಇಂತಹ ಸ್ಪರ್ಧೆ ಏರ್ಪಡಿಸಲು ಬಿಬಿಎಂಪಿ ಆಯುಕ್ತರಿಗೆ ಸಲಹೆ ನೀಡುತ್ತೇನೆ ಎಂದರು.

ಬೆಂಗಳೂರಿನ ನಿಜವಾದ ಸಂಪತ್ತು ಇಲ್ಲಿನ ಹವಾಮಾನ, ಬೆಂಗಳೂರಿನ ಹಸಿರು ರಕ್ಷಣೆಗೆ ಶಾಲಾ ಮಕ್ಕಳಿಂದ ಗಿಡ ನೆಟ್ಟು, ಬೆಳೆಸಲು ಆ್ಯಪ್ ಸಿದ್ಧಪಡಿಸಿದ್ದು ಮಕ್ಕಳು ತಮ್ಮ ಗಿಡದ ಬೆಳವಣಿಗೆ ಮಾಹಿತಿಯನ್ನು ಅಪ್ಲೋಡ್ ಮಾಡಬಹುದಾಗಿದೆ. ನಗರದ ಉದ್ಯಾನವನಗಳ ನಿರ್ವಹಣೆ ಜವಾಬ್ದಾರಿಯನ್ನು ಸ್ಥಳೀಯ ನಾಗರಿಕರಿಗೆ ವಹಿಸಲು ನಿರ್ಧರಿಸಿದ್ದೇವೆ ಎಂದರು.

ಐಶ್ವರ್ಯ ಡಿಕೆಎಸ್ ಹೆಗ್ಡೆ ಅವರು ಬೆಂಗಳೂರು ನಮ್ಮ ಪಾಲಿಗೆ ಭಾವನಾತ್ಮಕ ಸಂಬಂಧದ ಬ್ರ್ಯಾಂಡ್ ಆಗಿದೆ. ನಗರ ಅನೇಕ ಸಮಸ್ಯೆಗಳನ್ನು ಹೊಂದಿದ್ದರೂ, ತನ್ನ ಜ್ಞಾನ ಹಾಗೂ ಉದ್ಯಮ ಕೌಶಲ್ಯಕ್ಕೆ ಹೆಸರುವಾಸಿಯಾಗಿದೆ ಎಂದು ಮೆಚ್ಚುಗೆ ಸೂಚಿಸಿದರು.




> ತಮ್ಮ ಆಲೋಚನೆ ವ್ಯಕ್ತಪಡಿಸಿದ ಮಕ್ಕಳ ಆತ್ಮವಿಶ್ವಾಸ ಕಂಡು ಸಂತೋಷವಾಗಿದೆ. ಮಕ್ಕಳ ಸಲಹೆಗಳನ್ನು ತೀರ್ಪುಗಾರರಾಗಿ ಆಯ್ಕೆ ಮಾಡುವುದು ನಿಜಕ್ಕೂ ಸವಾಲಿನ ಕೆಲಸ.
>
> -ಡಾ.ಸುಧಾಮೂರ್ತಿ, ಲೇಖಕಿ

> ನಾವು ನಮ್ಮ ಮನೆ ಸ್ವಚ್ಛವಾಗಿ ಇಟ್ಟುಕೊಂಡಂತೆ ಪ್ರತಿಯೊಬ್ಬ ನಾಗರಿಕರಲ್ಲೂ ನಮ್ಮ ರಸ್ತೆ, ನಮ್ಮ ಬೀದಿ, ನಮ್ಮ ನಗರ ಎಂಬ ಭಾವನೆ ಬರಬೇಕು. ಪ್ರತಿ ಶಾಲಾ ಮಕ್ಕಳು ತಮ್ಮದೇ ಆದ ಆವಿಷ್ಕಾರದ ಆಲೋಚನೆ ಹೊಂದಿರುತ್ತಾರೆ. ಹೆಚ್ಚು ಆಲೋಚನೆ ಬಂದಷ್ಟು ನಮ್ಮ ನಗರ ಉತ್ತಮವಾಗುವುದು.
>
> -ರಮೇಶ್ ಅರವಿಂದ್, ಚಿತ್ರನಟ

> ಬೆಂಗಳೂರು ಕಸ ವಿಲೇವಾರಿ ಜತೆ ಅನೇಕ ಮಾಫಿಯಾಗಳಿವೆ. ನಿತ್ಯ 54 ಲಕ್ಷ ವಾಹನಗಳು ರಸ್ತೆಗಿಳಿಯುವ ಇಲ್ಲಿ ರಸ್ತೆ ಅಗಲೀಕರಣ ಅಸಾಧ್ಯ. ಇದಕ್ಕೆ ಸುರಂಗ ಮಾರ್ಗವೊಂದೇ ಪರಿಹಾರ ಎಂಬ ತೀರ್ಮಾನಕ್ಕೆ ಬರಲಾಗಿದ್ದು ದುಬಾರಿ ಆದರೂ ಮಾಡಬೇಕಿದೆ.
>
> -ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

# ನ್ಯಾಷನಲ್ ಹಿಲ್ ವ್ಯೂ ಶಾಲೆಗೆ ಪ್ರಶಸ್ತಿ



**ಬೆಂಗಳೂರು:** ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಶಾಲೆ ಹಾಗೂ ಕಸ್ತೂರಿ ನಗರದ ಪ್ರೆಸಿಡೆನ್ಸಿ ಶಾಲೆಗಳು ಬ್ರಾಂಡ್ ಬೆಂಗಳೂರು ಐಡಿಯಾಥಾನ್ ಸ್ಪರ್ಧೆಯ ವಿಜೇತರಾಗಿ ಹೊರಹೊಮ್ಮಿವೆ.

ನಗರದಲ್ಲಿ ಶನಿವಾರ ನಡೆದ ಅಂತಿಮ ಸುತ್ತಿನ ಸ್ಪರ್ಧೆಯಲ್ಲಿ ಪ್ರಶಸ್ತಿ ಮಕ್ಕಳಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಖ್ಯಾತ ನಟ ರಮೇಶ್ ಅರವಿಂದ್ ಅವರು ಪ್ರಮಾಣ ಪತ್ರ ನೀಡಿದರು. ಪ್ರಶಸ್ತಿ ವಿಜೇತ ವಿದ್ಯಾರ್ಥಿಗಳಿಗೆ ಹಾರ್ವಡ್ ವಿಶ್ವವಿದ್ಯಾಲಯದಲ್ಲಿ ನಡೆಯುವ 40 ಗಂಟೆಗಳ ಅನ್ವೇಷಣೆ ಮತ್ತು ವ್ಯಾಪಾರೋದ್ಯಮ ಕುರಿತ ಕಾರ್ಯಕ್ರಮಕ್ಕೆ ಸ್ಕಾಲರ್‌ಶಿಪ್ ನೀಡಲಾಗುವುದು.

ಶನಿವಾರ ನಡೆದ ಅಂತಿಮ ಸುತ್ತಿನ ಸ್ಪರ್ಧೆಯಲ್ಲಿ ಬನಶಂಕರಿಯ ಪ್ರೆಸಿಡೆನ್ಸಿ ಶಾಲೆ, ಎಸ್ ಜೆಆರ್ ಕೆಂಗೇರಿ ಪಬ್ಲಿಕ್ ಶಾಲೆ, ಒಕ್ರಿಡ್ಜ್ ಇಂಟರ್ ನ್ಯಾಷನಲ್ ಶಾಲೆ, ಸೆಂಟ್ ಮಾರ್ಕ್ಸ್ ಕಾನ್ವೆಂಟ್, ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಪಬ್ಲಿಕ್ ಶಾಲೆ, ಮಿತ್ರಾ ಅಕಾಡೆಮಿ, ಕಸ್ತೂರಿನಗರದ ಪ್ರೆಸಿಡೆನ್ಸಿ ಶಾಲೆ ಭಾಗವಹಿಸಿದ್ದವು.

ಲೇಖಕಿ ಸುಧಾಮೂರ್ತಿ, ರಾಜ್ಯ ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಡಾ. ಅನೂಪ್ ನಾಯಕ್, ಜಿ. ಬಾಲ ಸುಬ್ರಮಣಿಯನ್, ರಮೇಶ್ ಜೂಡ್ ಥಾಮಸ್ ಅವರು ಅಂತಿಮ ಸುತ್ತಿನ ತೀರ್ಪುಗಾರರಾಗಿದ್ದರು.

ಜನದನಿಯ ಸಾರಥಿ
ವಾರ್ತಾ ಭಾರತಿ

# ಆ್ಯಂಬುಲೆನ್ಸ್‌ಗೆ ಸುಗಮ ದಾರಿ, ಪಿಂಕ್ ಬೂತ್ ಅನುಷ್ಠಾನ

## ಡಿಕೆಶಿ

ಬೆಂಗಳೂರು, ಜ.13: ಆ್ಯಂಬುಲೆನ್ಸ್ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್ ಜತೆ ವೈರ್‌ಲೆಸ್ ಸಂಪರ್ಕ, ಹೂವು ಮತ್ತು ಆಹಾರ ತ್ಯಾಜ್ಯಗಳ ಸಮರ್ಪಕ ವಿಲೇವಾರಿ, ಋತುಸ್ರಾವ ಮಹಿಳೆಯರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್‌ಬೂತ್ ಸ್ಥಾಪನೆ ಸೇರಿ ಐಡಿಯಾಥಾನ್ ಸಲಹೆಗಳನ್ನು ಅನುಷ್ಠಾನ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.



ಶನಿವಾರ ನಗರದಲ್ಲಿ ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತಿನ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ಆ್ಯಂಬುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್‌ಗಳ ಜೊತೆ ವೈರ್‌ಲೆಸ್ ಸಂಪರ್ಕ, ಋತುಸ್ರಾವವಾದ ಮಹಿಳೆಯರ ಅನುಕೂಲಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ, ಸಮಾರಂಭಗಳಲ್ಲಿ ಬಳಸಿದ ಹೂವು ಮತ್ತು ಆಹಾರ ತ್ಯಾಜ್ಯಗಳ ಸಮರ್ಪಕ ವಿಲೇವಾರಿ ಸೇರಿ ಐಡಿಯಾಥಾನ್ ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಜಾರಿ ಮಾಡಲಾಗುವುದು ಎಂದರು.

ಐಶ್ವರ್ಯಾ ಡಿಕೆಎಸ್ ಮಾತನಾಡಿ, 'ನಗರದ ಸಮಸ್ಯೆ, ಸವಾಲುಗಳ ಬಗ್ಗೆ ಮಾತ್ರ ಚರ್ಚೆ ಮಾತ್ರವಲ್ಲದೇ ಸಕಾರಾತ್ಮಕ ಬದಲಾವಣೆಗೆ ಯುವಜನರ ಆಲೋಚನೆ, ಪರಿಕಲ್ಪನೆಗಳ ಅನ್ವೇಷಣೆ ಉದ್ದೇಶದೊಂದಿಗೆ ನಾವು ಇಂದು ಸೇರಿದ್ದೇವೆ. ಶಾಲಾ ಮಕ್ಕಳು ನಮ್ಮ ನೆಚ್ಚಿನ ನಗರದ ಭವಿಷ್ಯದ ನಿರ್ಮಾಣದಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಚಾರ ಎಂದರು. ಕಾರ್ಯಕ್ರಮದಲ್ಲಿ ಉದ್ಯಮಿ ಸುಧಾಮೂರ್ತಿ, ನಟ ರಮೇಶ್ ಅರವಿಂದ್, ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸೇರಿದಂತೆ ಪ್ರಮುಖರಿದ್ದರು.

> “ನಾವು ಹಲವು ಕ್ಷೇತ್ರಗಳಲ್ಲಿ ವಿಫಲವಾಗಿದ್ದೇವೆ. ಕಸ ವಿಲೇವಾರಿ ಜತೆ ಅನೇಕ ಮಾಫಿಯಾಗಳಿವೆ. ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿದೆ. 54 ಲಕ್ಷ ವಾಹನಗಳು ನಿತ್ಯ ರಸ್ತೆಗಿಳಿಯುತ್ತವೆ. ಇದಕ್ಕೆ ತಕ್ಕಂತೆ ರಸ್ತೆ ಅಗಲೀಕರಣ ಸದ್ಯದ ಸ್ಥಿತಿಯಲ್ಲಿ ಅಸಾಧ್ಯ. ಅನೇಕರ ಜತೆ ಚರ್ಚೆಯ ನಂತರ ಸುರಂಗ ಮಾರ್ಗವೊಂದೇ ಪರಿಹಾರ ಎಂಬ ತೀರ್ಮಾನಕ್ಕೆ ಬರಲಾಗಿದೆ. ದುಬಾರಿ ಆದರೂ ಮಾಡಬೇಕಿದೆ.
>
> – ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

# ಉದಯಕಾಲ

ಕನ್ನಡಿಗರ ಜೀವಾಳ


## ಐಡಿಯಾಥಾನ್ ಸಲಹೆಗಳ ಅನುಷ್ಠಾನ: ಡಿಸಿಎಂ ಡಿ.ಕೆ. ಶಿವಕುಮಾರ್

# ಆಂಬುಲೆನ್ಸ್ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್ ಜೊತೆ ವೈರ್‌ಲೆಸ್ ಸಂಪರ್ಕ

# ಋತುಸ್ರಾವದ ಮಹಿಳೆಯರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ

ಉದಯಕಾಲ ನ್ಯೂಸ್

**ಬೆಂಗಳೂರು:** ಅಂಬುಲೆನ್ಸ್‌ಗಳ ಸುಗಮ ಸಂಚಾರಕ್ಕೆ ಟ್ರಾಫಿಕ್ ಸಿಗ್ನಲ್‌ಗಳ ಜೊತೆ ವೈರ್‌ಲೆಸ್ ಸಂಪರ್ಕ, ಋತುಸ್ರಾವ ಮಹಿಳೆಯರ ಅನುಕೂಲಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ಸ್ಥಾಪನೆ, ಸಮಾರಂಭಗಳಲ್ಲಿ ಬಳಸಿದ ಹೂವು ಮತ್ತು ಆಹಾರ ತ್ಯಾಜ್ಯಗಳ ಸಮರ್ಪಕ ವಿಲೇವಾರಿ ಸೇರಿ ಐಡಿಯಾಥಾನ್ ಸ್ಪರ್ಧೆಯ ಅತ್ಯುತ್ತಮ ಸಲಹೆಗಳನ್ನು ಜಾರಿ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕಳೆದೊಂದು ತಿಂಗಳಿಂದ ನಡೆದ ಯುವ ನಾಯಕತ್ವ ಸಮ್ಮೇಳನ ಹಾಗೂ ಐಡಿಯಾಥಾನ್ ಸ್ಪರ್ಧೆಯ ಅಂತಿಮ ಸುತ್ತು ನಗರದಲ್ಲಿ ಶನಿವಾರ ನಡೆಯಿತು. ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಬ್ರ್ಯಾಂಡ್ ಬೆಂಗಳೂರು ಯೋಜನೆ ಮೂಲಕ ಬೆಂಗಳೂರಿನ ಸಮಸ್ಯೆಗಳಿಗೆ ಶಾಲಾ ಮಕ್ಕಳು ಈ ಐಡಿಯಾಥಾನ್ ಸ್ಪರ್ಧೆ ಮೂಲಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ. ದೇಶದ ಬೆಳವಣಿಗೆ ನಿಮ್ಮ ಆಲೋಚನೆ, ನಾಯಕತ್ವ ಗುಣ ಅತ್ಯಗತ್ಯ. ಕೇವಲ ರಾಜಕಾರಣಿಗಳು ಮಾತ್ರ ನಾಯಕರಲ್ಲ, ನಿಮ್ಮಲ್ಲೂ ನಾಯಕತ್ವ ಗುಣ ಇವೆ. ನೀವು ಯಾವುದೇ ಕ್ಷೇತ್ರ ಆಯ್ಕೆ ಮಾಡಿಕೊಂಡರೂ ನಾಯಕತ್ವದ ಗುಣ ಬೆಳೆಸಿಕೊಳ್ಳಬೇಕು ಎಂದರು.

ಇದು ಕೇವಲ ಆರಂಭ. ಶಾಲಾ ಮಟ್ಟದಲ್ಲಿ ಇಂತಹ ಸ್ಪರ್ಧೆ ಏರ್ಪಡಿಸಲು ಬಿಬಿಎಂಪಿ ಆಯುಕ್ತರಿಗೆ ಸಲಹೆ ನೀಡುತ್ತೇನೆ. ಹೆಚ್ಚು, ಹೆಚ್ಚು ಆಲೋಚನೆಗಳು ಬಂದಂತೆ ನಮ್ಮ ನಗರ ಹೆಚ್ಚು, ಹೆಚ್ಚು ಸುಧಾರಣೆ, ಅಭಿವೃದ್ಧಿ ಆಗುತ್ತದೆ ಎಂದು ತಿಳಿಸಿದರು.

ನಾನಿಲ್ಲಿ ಭಾಷಣ ಮಾಡುವುದಕ್ಕಿಂತ ಮಕ್ಕಳ ಆಲೋಚನೆ ಆಲಿಸಿ, ಅದನ್ನು ಜಾರಿಗೆ ತರಲು ಬಂದಿದ್ದೇನೆ. ಬೆಂಗಳೂರು ಯೋಜಿತ ನಗರವಲ್ಲ, ಈ ನಗರಕ್ಕೆ ದೂರದೃಷ್ಟಿ ಆಲೋಚನೆಗಳು, ನೀತಿಗಳು ಬಹಳ ಮುಖ್ಯ. ಸಂಚಾರ ದಟ್ಟಣೆ, ಕಸ ವಿಲೇವಾರಿ ಪ್ರಮುಖ ಸಮಸ್ಯೆಗಳಾಗಿವೆ. ಇವಕ್ಕೆ ಮಕ್ಕಳು ತಮ್ಮ ಆಲೋಚನೆಗಳ ಮೂಲಕ ಪರಿಹಾರ ನೀಡಲು ಮುಂದಾಗಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಬೆಂಗಳೂರಿನ ನಿಜವಾದ ಸಂಪತ್ತು, ಶಕ್ತಿ ಎಂದರೆ ಇಲ್ಲಿನ ಹವಾಮಾನ, ಸಂಸ್ಕೃತಿ ಹಾಗೂ ಮಾನವ ಸಂಪನ್ಮೂಲ. ಬೆಂಗಳೂರಿನ ಹಸಿರು ರಕ್ಷಣೆಗೆ ಸರ್ಕಾರ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಶಾಲಾ ಮಕ್ಕಳಿಂದ ಗಿಡ ನೆಟ್ಟು, ಬೆಳೆಸುವ ಜವಾಬ್ದಾರಿ ನೀಡಲಾಗುವುದು. ಇದಕ್ಕಾಗಿ ಆಪ್ ಸಿದ್ಧಪಡಿಸಿದ್ದು ಮಕ್ಕಳು ತಮ್ಮ ಗಿಡದ ಬೆಳವಣಿಗೆ ಮಾಹಿತಿಯನ್ನು ಅಪ್ಲೋಡ್ ಮಾಡಬಹುದಾಗಿದೆ. ನಗರದ ಉದ್ಯಾನವನಗಳ ನಿರ್ವಹಣೆ ಜವಾಬ್ದಾರಿಯನ್ನು ಸ್ಥಳೀಯ ನಾಗರೀಕರಿಗೆ ವಹಿಸಲು ನಿರ್ಧರಿಸಿದ್ದೇವೆ ಎಂದರು.

ನಾವು ಹಲವು ಕ್ಷೇತ್ರಗಳಲ್ಲಿ ವಿಫಲವಾಗಿದ್ದೇವೆ. ಕಸ ವಿಲೇವಾರಿ ಜತೆ ಅನೇಕ ಮಾಫಿಯಾಗಳಿವೆ. ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿದೆ. 54 ಲಕ್ಷ ವಾಹನಗಳು ನಿತ್ಯ ರಸ್ತೆಗಿಳಿಯುತ್ತವೆ. ಇದಕ್ಕೆ ತಕ್ಕಂತೆ ರಸ್ತೆ ಅಗಲೀಕರಣ ಸದ್ಯದ ಸ್ಥಿತಿಯಲ್ಲಿ ಅಸಾಧ್ಯ. ಅನೇಕರ ಜತೆ ಚರ್ಚೆ ನಂತರ ಸುರಂಗ ಮಾರ್ಗವೊಂದೇ ಪರಿಹಾರ ಎಂಬ ತೀರ್ಮಾನಕ್ಕೆ ಬರಲಾಗಿದೆ. ದುಬಾರಿ ಆದರೂ ಮಾಡಬೇಕಿದೆ ಎಂದರು.



## ಮಕ್ಕಳ ಆಲೋಚನೆಗಳಿಂದ ಅನೇಕ ವಿಚಾರ ಕಲಿತೆ: ಸುಧಾಮೂರ್ತಿ




ಕೆಲವಂ ಬಲ್ಲವರಿಂದ ಕಲ್ತು, ಕೆಲವಂ ಶಾಸ್ತ್ರಂಗಳಂ ಕೇಳುತುಂ, ಕೆಲವಂ ಮಾಳ್ಪವರಿಂದ ಕಂಡು, ಕೆಲವಂ ಸುಜ್ಞಾನದಿಂ ನೋಡುತುಂ, ಕೆಲವಂ ಸಜ್ಜನ ಸಂಗದಿಂದಲರಿಯಲ್ ಎಂಬ ವಚನದಂತೆ ಯುವ ಪೀಳಿಗೆಯಿಂದ ನಾನು ಕೆಲವು ವಿಚಾರ ಕಲಿಯುವಂತಾಗಿದೆ ಎಂದು ಉದ್ಯಮಿ ಹಾಗೂ ಲೇಖಕಿ ಸುಧಾಮೂರ್ತಿ ತಿಳಿಸಿದರು. ತಮ್ಮ ಆಲೋಚನೆ ವ್ಯಕ್ತಪಡಿಸಿದ ಮಕ್ಕಳ ಆತ್ಮವಿಶ್ವಾಸ ಕಂಡು ಸಂತೋಷವಾಗಿದೆ. ಇಲ್ಲಿನ ಮಕ್ಕಳ ಸಲಹೆಗಳನ್ನು ತೀರ್ಪುಗಾರರಾಗಿ ಆಯ್ಕೆ ಮಾಡುವುದು ನಿಜಕ್ಕೂ ಸವಾಲಿನ ಕೆಲಸ ಎಂದರು. ಮಕ್ಕಳು ವಾರಕ್ಕೊಮ್ಮೆ ಸಾಮಾಜಿಕ ಚಟುವಟಿಕೆಯಲ್ಲಿ ಭಾಗವಹಿಸಬೇಕು. ಏಳು ಶಾಲೆಗಳ ಮಕ್ಕಳ ಪರಿಕಲ್ಪನೆ ಅತ್ಯುತ್ತಮವಾಗಿದೆ. ಪ್ರತಿ ಎಲೆಯೂ ಔಷಧಿ ಗುಣ ಹೊಂದಿರುವಂತೆ ಪ್ರತಿ ಅಕ್ಷರವೂ ಜ್ಞಾನ ಹೊಂದಿರುತ್ತದೆ. ಅದೇ ರೀತಿ ಪ್ರತಿ ಮಗುವಿನಲ್ಲೂ ಹೊಸ ಆಲೋಚನೆಗಳು ಇರುತ್ತವೆ. ಇಂತಹ ಆಲೋಚನೆಗಳಿಗೆ ವೇದಿಕೆ ಕಲ್ಪಿಸಿರುವ ಐಶ್ವರ್ಯ ಅವರಿಗೆ ಅಭಿನಂದನೆಗಳು ಎಂದು ತಿಳಿಸಿದರು.

## ಬೆಂಗಳೂರು ನಮ್ಮ ಪಾಲಿಗೆ ಭಾವನಾತ್ಮಕ ಸಂಬಂಧದ ಬ್ರ್ಯಾಂಡ್: ಐಶ್ವರ್ಯ ಡಿಕೆಎಸ್ ಹೆಗ್ಡೆ

ಐಡಿಯಾಥಾನ್ ರೂವಾರಿ ಐಶ್ವರ್ಯ ಡಿಕೆಎಸ್ ಹೆಗ್ಡೆ ಮಾತನಾಡಿ, ನಗರದ ಸಮಸ್ಯೆ, ಸವಾಲುಗಳ ಬಗ್ಗೆ ಮಾತ್ರ ಚರ್ಚೆ ಮಾತ್ರವಲ್ಲದೇ ಸಕಾರಾತ್ಮಕ ಬದಲಾವಣೆಗೆ ಯುವಕರ ಆಲೋಚನೆ, ಪರಿಕಲ್ಪನೆಗಳ ಅನ್ವೇಷಣೆ ಉದ್ದೇಶದೊಂದಿಗೆ ನಾವಿಂದು ಸೇರಿದ್ದೇವೆ ಎಂದರು. ಬೆಂಗಳೂರು ನಮ್ಮ ಪಾಲಿಗೆ ಭಾವನಾತ್ಮಕ ಸಂಬಂಧದ ಬ್ರ್ಯಾಂಡ್ ಆಗಿದೆ. ನಮ್ಮ ನಗರ ಅನೇಕ ಸಮಸ್ಯೆಗಳನ್ನು ಹೊಂದಿದ್ದರೂ, ತನ್ನ ಜ್ಞಾನ ಹಾಗೂ ಉದ್ಯಮ ಕೌಶಲ್ಯಕ್ಕೆ ಹೆಸರುವಾಸಿಯಾಗಿದೆ. ನಮ್ಮ ನಗರ ಎಲ್ಲರನ್ನೂ ತನ್ನವರೆಂದು ಒಳಗೊಳ್ಳುವ ಅವಕಾಶ ಕಲ್ಪಿಸುತ್ತದೆ ಎಂದು ತಿಳಿಸಿದರು.

ಶಾಲಾ ಮಕ್ಕಳು ನಮ್ಮ ನೆಚ್ಚಿನ ನಗರದ ಭವಿಷ್ಯದ ನಿರ್ಮಾಣದಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಚಾರ. ಅವರು ವಿದ್ಯಾರ್ಥಿಗಳಾಗಿ ಬಂದಿಲ್ಲ, ಜವಾಬ್ದಾರಿಯುತ ನಾಗರಿಕರಾಗಿ ಭಾಗವಹಿಸಿದ್ದಾರೆ. ಮಿತ್ರಾ ಅಕಾಡೆಮಿಯ ಮಕ್ಕಳು ಋತುಸ್ರಾವ ಸಮಯದಲ್ಲಿ ಮಹಿಳೆಯರ ಸಮಸ್ಯೆಗೆ ಪರಿಹಾರವಾಗಿ ಕೊಟ್ಟ ಸಲಹೆ ನನ್ನ ಮನಸ್ಸನ್ನು ಸೆಳೆದಿದೆ. ಋತುಸ್ರಾವ ಮಹಿಳೆಯರ ಬಳಕೆಗೆ ಸಾರ್ವಜನಿಕ ಸ್ಥಳಗಳಲ್ಲಿ ಪಿಂಕ್ ಬೂತ್ ವ್ಯವಸ್ಥೆ ಆಲೋಚನೆ ನಿಜಕ್ಕೂ ಶ್ಲಾಘನೀಯ. ನಾನು ನಾಲ್ಕೈದು ಸಂಸ್ಥೆಗಳ ಜವಾಬ್ದಾರಿ ಹೊತ್ತಿದ್ದು, ನನ್ನ ಶಿಕ್ಷಣ ಸಂಸ್ಥೆಗಳು ಹಾಗೂ ಮಾಲ್ ಗಳಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರುತ್ತೇನೆ ಎಂದು ವಿವರಿಸಿದರು.

## ಆಲೋಚನೆ ಹೆಚ್ಚಾದಷ್ಟೂ ನಗರ ಉತ್ತಮವಾಗುತ್ತದೆ: ರಮೇಶ್ ಅರವಿಂದ್




ಬ್ರ್ಯಾಂಡ್ ಬೆಂಗಳೂರು ಎಂದರೇನು? ಬೆಂಗಳೂರು ಉದ್ಯಾನ ನಗರಿ. ಈ ಕೀರ್ತಿ ಬಂದಿದ್ದು ಕೇವಲ ಲಾಲ್ ಬಾಗ್ ಹಾಗೂ ಕಬ್ಬನ್ ಪಾರ್ಕ್ ನಿಂದ ಮಾತ್ರವಲ್ಲ, ಈ ಹಿಂದೆ ಎಲ್ಲರ ಮನೆ ಮುಂದೆ ಉದ್ಯಾನವನವಿತ್ತು. ನಂತರ ಕ್ರಮೇಣ ಅವು ಮರೆಯಾದವು. ಈಗ ಬೆಂಗಳೂರು ಸಿಲಿಕಾನ್ ವ್ಯಾಲಿ, ಐಟಿ ರಾಜಧಾನಿ ಎಂಬ ಹೆಗ್ಗಳಿಕೆ ಗಳಿಸಿದೆ ಎಂದು ನಟ ರಮೇಶ್ ಅರವಿಂದ್ ಹೇಳಿದರು.

ನಾವು ನಮ್ಮ ಮನೆ ಸ್ವಚ್ಛವಾಗಿ ಇಟ್ಟುಕೊಂಡಂತೆ ರಸ್ತೆಯನ್ನು ಯಾಕೆ ಸ್ವಚ್ಛ ಇಟ್ಟುಕೊಂಡಿಲ್ಲ. ಪ್ರತಿಯೊಬ್ಬ ನಾಗರಿಕರಲ್ಲೂ ನಮ್ಮ ರಸ್ತೆ, ನಮ್ಮ ಬೀದಿ, ನಮ್ಮ ಏರಿಯಾ, ನಮ್ಮ ನಗರ ಎಂಬ ಭಾವನೆ ಬರಬೇಕು. ನಮ್ಮ ನಗರದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುತ್ತೇನೆ ಎಂದರು.

ನಮ್ಮ ನಗರದಲ್ಲಿ ಸಂಭ್ರಮಿಸಲು ಅನೇಕ ವಿಚಾರಗಳಿವೆ. ನಾವು ಎಲ್ಲಾ ಆಲೋಚನೆಗಳನ್ನು ಸ್ವಾಗತಿಸಬೇಕು. ಇಂತಹ ಆಲೋಚನೆಗಳೇ ಹೊಸ ಆವಿಷ್ಕಾರಕ್ಕೆ ದಾರಿ ಮಾಡಿಕೊಡುತ್ತವೆ. ಭರವಸೆಯೇ ಮುಂದೆ ಇತಿಹಾಸವಾಗಿ ಮಾರ್ಪಾಡಾಗುತ್ತದೆ. ಪ್ರತಿ ಶಾಲಾ ಮಕ್ಕಳು ತಮ್ಮದೇ ಆದ ಆವಿಷ್ಕಾರದ ಆಲೋಚನೆ ಹೊಂದಿರುತ್ತವೆ. ಹೆಚ್ಚು ಆಲೋಚನೆ ಬಂದಷ್ಟು ನಮ್ಮ ನಗರ ಉತ್ತಮವಾಗಿರುತ್ತದೆ ಎಂದು ತಿಳಿಸಿದರು.




## ನ್ಯಾಷನಲ್ ಹಿಲ್ ವ್ಯೂ, ಪ್ರೆಸಿಡೆನ್ಸಿ ಶಾಲೆಗೆ ಬ್ರ್ಯಾಂಡ್ ಬೆಂಗಳೂರು ಐಡಿಯಾಥಾನ್ ಪ್ರಶಸ್ತಿ

**ಬೆಂಗಳೂರು:** ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಶಾಲೆ ಹಾಗೂ ಕಸ್ತೂರಿ ನಗರದ ಪ್ರೆಸಿಡೆನ್ಸಿ ಶಾಲೆಗಳು ಬ್ರ್ಯಾಂಡ್ ಬೆಂಗಳೂರು ಐಡಿಯಾಥಾನ್ ಸ್ಪರ್ಧೆಯ ವಿಜೇತರಾಗಿ ಹೊರಹೊಮ್ಮಿವೆ. ಶನಿವಾರ ನಡೆದ ಅಂತಿಮ ಸುತ್ತಿನ ಸ್ಪರ್ಧೆಯಲ್ಲಿ ಪ್ರಶಸ್ತಿ ವಿಜೇತ ಮಕ್ಕಳಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ನಟ ರಮೇಶ್ ಅರವಿಂದ್ ಅವರು ಪ್ರಮಾಣ ಪತ್ರ ನೀಡಿದರು. ಪ್ರಶಸ್ತಿ ವಿಜೇತ ವಿದ್ಯಾರ್ಥಿಗಳಿಗೆ ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ನಡೆಯುವ 40 ಗಂಟೆಗಳ ಅನ್ವೇಷಣೆ ಮತ್ತು ವ್ಯಾಪಾರೋದ್ಯಮ ಕುರಿತ ಕಾರ್ಯಕ್ರಮಕ್ಕೆ ಸ್ಕಾಲರ್ ಶಿಪ್ ನೀಡಲಾಗುವುದು.

ಕಳೆದ ವರ್ಷ ನವೆಂಬರ್ 14ರಂದು ಆರಂಭವಾದ ಈ ಸ್ಪರ್ಧೆಯಲ್ಲಿ ಒಟ್ಟು 200 ಶಾಲೆಗಳು ಭಾಗವಹಿಸಿದ್ದು, ಎರಡನೇ ಸುತ್ತಿಗೆ 50 ಶಾಲೆಗಳನ್ನು ಆಯ್ಕೆ ಮಾಡಲಾಗಿದ್ದು, ನಂತರ ಮೂರನೇ ಸುತ್ತಿನಲ್ಲಿ 25 ಶಾಲೆಗಳನ್ನು ಆಯ್ಕೆ ಮಾಡಲಾಯಿತು. ಅಂತಿಮ ಸುತ್ತಿಗೆ ಪ್ರಮುಖ 7 ಶಾಲೆಗಳನ್ನು ಆಯ್ಕೆ ಮಾಡಲಾಗಿತ್ತು.

ಶನಿವಾರ ನಡೆದ ಅಂತಿಮ ಸುತ್ತಿನ ಸ್ಪರ್ಧೆಯಲ್ಲಿ ಬನಶಂಕರಿಯ ಪ್ರೆಸಿಡೆನ್ಸಿ ಶಾಲೆ, ಎಸ್ ಜೆಆರ್ ಕೆಂಗೇರಿ ಪಬ್ಲಿಕ್ ಶಾಲೆ, ಒಕ್ರಿಡ್ಜ್ ಇಂಟರ್ ನ್ಯಾಷನಲ್ ಶಾಲೆ, ಸೆಂಟ್ ಮಾರ್ಕ್ಸ್ ಕಾನ್ವೆಂಟ್, ಬನಶಂಕರಿಯ ನ್ಯಾಷನಲ್ ಹಿಲ್ ವ್ಯೂ ಪಬ್ಲಿಕ್ ಶಾಲೆ, ಮಿತ್ರಾ ಅಕಾಡೆಮಿ, ಕಸ್ತೂರಿನಗರದ ಪ್ರೆಸಿಡೆನ್ಸಿ ಶಾಲೆ ಭಾಗವಹಿಸಿದ್ದವು.

ಲೇಖಕಿ ಸುಧಾಮೂರ್ತಿ, ರಾಜ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಡಾ. ಅನೂಪ್ ನಾಯಕ್, ಜಿ. ಬಾಲಸುಬ್ರಮಣಿಯನ್, ರಮೇಶ್ ಜೂಡ್ ಥಾಮಸ್ ಅವರು ಅಂತಿಮ ಸುತ್ತಿನ ತೀರ್ಪುಗಾರರಾಗಿದ್ದರು.